**FILE No. ENERGY/293/VSC/2019-EMC-ENERGY SECRETARIAT**

# ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರದ ಸಚಿವಾಲಯ
2ನೇ ಮಹಡಿ, ವಿಕಾಸ ಸೌಧ,
ಬೆಂಗಳೂರು, ದಿನಾಂಕ : 03-07-2020

## ಸುತ್ತೋಲೆ

ವಿಷಯ: ಅನಧಿಕೃತ ಬಡಾವಣೆಗಳಲ್ಲಿ ನಿರ್ಮಾಣಗೊಂಡಿರುವ ಕಟ್ಟಡಗಳು ಹಾಗೂ ವಾಸ ದೃಢೀಕರಣ ಪತ್ರವನ್ನು ನೀಡದಿರುವ ಬಹುಮಹಡಿ ಕಟ್ಟಡಗಳು ಮತ್ತು ಹೆಚ್.ಟಿ ಸ್ಥಾವರಗಳಿಗೆ ತಾತ್ಕಾಲಿಕ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ

*****

1. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ Conditions of Supply of Electricity of Distribution Licensee in the State of Karnataka ನಿಯಮಾವಳಿಯ ಕಂಡಿಕೆ 9.0 ಮತ್ತು 8.11 ಮತ್ತು ತತ್ಸಂಬಂಧ ಹೊರಡಿಸಲಾದ ತಿದ್ದುಪಡಿಗಳನ್ವಯ ಕ್ರಮವಾಗಿ LT ಮತ್ತು HT ಪ್ರವರ್ಗದ ಬಹುಮಹಡಿ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ವಾಸ ದೃಢೀಕರಣ ಪತ್ರವನ್ನು (Occupancy Certificate) ಅರ್ಜಿದಾರರು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.

   ಪ್ರಸ್ತುತ, ಕಟ್ಟಡ ನಿರ್ಮಾಣ ಹಂತದಲ್ಲಿ ಅರ್ಜಿದಾರರಿಗೆ ತಾತ್ಕಾಲಿಕ ವಿದ್ಯುತ್ ಸಂಪರ್ಕವನ್ನು ನೀಡಲಾಗುತ್ತಿದ್ದು, ಕಟ್ಟಡಗಳ ನಿರ್ಮಾಣವು ಪೂರ್ಣಗೊಂಡು ವಾಸ ದೃಢೀಕರಣ ಪತ್ರವನ್ನು ಅರ್ಜಿದಾರರಿಂದ ಪಡೆದ ನಂತರ ವಿದ್ಯುತ್ ಸರಬರಾಜು ಕಂಪನಿಗಳು ಶಾಶ್ವತ ವಿದ್ಯುತ್ ಸಂಪರ್ಕವನ್ನು ಕಲ್ಪಿಸುತ್ತಿವೆ.

   ಆದರೆ, ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ವಿದ್ಯುತ್ ಮಂಜೂರಾತಿಯನ್ನು ಪಡೆದು, ಠೇವಣಿ ಹಣವನ್ನು ಪಾವತಿಸಿ, ವಾಸ ದೃಢೀಕರಣ ಪತ್ರವನ್ನು ಸಲ್ಲಿಸದಿರುವುದರಿಂದ ಶಾಶ್ವತ ವಿದ್ಯುತ್ ಸಂಪರ್ಕ ಪಡೆಯಲು ಹಲವು ಅರ್ಜಿಗಳು ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಬಾಕಿಯಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

2. ಮುಂದುವರೆದು, ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಅನಧಿಕೃತ ಖಾಸಗಿ ಬಡಾವಣೆಗಳ ರಚನೆಯಾಗುತ್ತಿದ್ದು, ಬಡಾವಣೆ ಅಭಿವೃದ್ಧಿದಾರರು ಯಾವುದೇ ವಿದ್ಯುತ್ ಮೂಲಸೌಕರ್ಯವನ್ನು ರಚಿಸದಿರುವುದರಿಂದ ಸದರಿ ಅನಧಿಕೃತ ಬಡಾವಣೆಗಳಲ್ಲಿ ನಿರ್ಮಾಣವಾಗಿರುವ ಮನೆಗಳು/ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡುವಂತೆ ಅರ್ಜಿದಾರರು ಒತ್ತಾಯಿಸುತ್ತಿರುವುದು ಸರ್ಕಾರ ಗಮನಕ್ಕೆ ಬಂದಿರುತ್ತದೆ.

   ಆದರೆ, ಅನಧಿಕೃತ ಬಡಾವಣೆಗಳಲ್ಲಿ ನಿರ್ಮಾಣವಾಗಿರುವ ಮನೆಗಳು/ಕಟ್ಟಡಗಳಿಗೆ ಮೂಲಸೌಕರ್ಯ ಅಭಿವೃದ್ಧಿ ಶುಲ್ಕವನ್ನು ಪಡೆಯದೆ ಶಾಶ್ವತ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ Conditions of Supply of Electricity of Distribution Licensee in the State of Karnataka ನಿಯಮಾವಳಿಯಡಿ ಅವಕಾಶವಿರುವುದಿಲ್ಲ.

ಈ ಕಾರಣದಿಂದಾಗಿ, ನಿರ್ಮಾಣ ಹಂತದಲ್ಲಿರುವ ಅಥವಾ ನಿರ್ಮಾಣ ಪೂರ್ಣಗೊಂಡು ವಾಸ ದೃಢೀಕರಣ ಪತ್ರವನ್ನು (Occupancy Certificate) ಸಲ್ಲಿಸದಿರುವ LT ಮತ್ತು HT ಬಹುಮಹಡಿ ಕಟ್ಟಡಗಳಿಗೆ ಹಾಗೂ ಅನಧಿಕೃತ ಬಡಾವಣೆಗಳಲ್ಲಿ ನಿರ್ಮಾಣ ಹಂತದಲ್ಲಿರುವ ಅಥವಾ ನಿರ್ಮಾಣ ಪೂರ್ಣಗೊಂಡು ವಿದ್ಯುತ್ ಸಂಪರ್ಕ ಕೋರಿ ಅರ್ಜಿ ಸಲ್ಲಿಸುವ ಕಟ್ಟಡಗಳಿಗೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ Conditions of Supply of Electricity of Distribution Licensee in the State of Karnataka ನಿಯಮಾವಳಿಯ ಪ್ರಕಾರ ತಾತ್ಕಾಲಿಕ ವಿದ್ಯುತ್ ಸಂಪರ್ಕವನ್ನು ಮೊದಲ ಹಂತದಲ್ಲಿ 2 ವರ್ಷಗಳ ಅವಧಿಗೆ ಕಲ್ಪಿಸಲು ಕ್ರಮ ವಹಿಸುವಂತೆ ಸೂಚಿಸಲಾಗಿದೆ.

ಒಂದು ವೇಳೆ, ಸ್ಥಳೀಯ ಪ್ರಾಧಿಕಾರಗಳು ಅನಧಿಕೃತ ಬಡಾವಣೆ/ಕಟ್ಟಡಗಳ ಮೇಲೆ ಕ್ರಮ ಜರುಗಿಸಿದ್ದಲ್ಲಿ ಹಾಗೂ LT ಮತ್ತು HT ಬಹುಮಹಡಿ ಕಟ್ಟಡಗಳಿಗೆ ನಕ್ಷೆ ಅನುಮೋದಿಸುವ ಪ್ರಾಧಿಕಾರಗಳು ನಕ್ಷೆಯ ಉಲ್ಲಂಘನೆಯನ್ನು ಪರಿಶೀಲಿಸಿ, ವಿದ್ಯುತ್ ಸರಬರಾಜನ್ನು ಸ್ಥಗಿತಗೊಳಿಸಲು ವಿದ್ಯುತ್ ಸರಬರಾಜು ಕಂಪನಿಗಳಿಗೆ ತಿಳಿಸಿದಲ್ಲಿ, ವಿದ್ಯುತ್ ಸಂಪರ್ಕವನ್ನು ಸ್ಥಗಿತಗೊಳಿಸಲು ಕ್ರಮ ವಹಿಸುವಂತೆ ಸೂಚಿಸಲಾಗಿದೆ.

**(ಮಾನ್ಯ ಮುಖ್ಯಮಂತ್ರಿಯವರಿಂದ ಅನುಮೋದಿತ)**

(ಶಾಂತಾರಾಮ) 3/7
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ)
ಇಂಧನ ಇಲಾಖೆ

**ಪ್ರತಿ:**

1) ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕೆ.ಆರ್. ವೃತ್ತ, ಬೆಂಗಳೂರು.
2) ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು.
3) ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಮಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
5) ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರ್ಗಿ.

**ಪ್ರತಿ ಮಾಹಿತಿಗಾಗಿ:**

1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.

ಕ್ರಮಾಂಕ: ಪ್ರವ್ಯ(ತಾ)/ಉ.ಪ್ರ.ವ್ಯ(ತಾ)/ಸ.ಪ್ರ.ವ್ಯ(ತಾ)–2/2020–21/ CYS-456 ದಿನಾಂಕ: 09 JUL 2020

**ಮೆಮೋ**

ಉಲ್ಲೇಖ: ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು ರವರ ಸುತ್ತೋಲೆ ಪತ್ರ ಸಂಖ್ಯೆ: ENERGY/293/VSC/2019-EMC-ENERGY SECRETARIAT ದಿನಾಂಕ: 03.07.2020.

ಇವರಿಗೆ,

ಮುಖ್ಯ ಇಂಜಿನಿಯರ್(ವಿ), ಕಾ ಮತ್ತ ಪಾ ವಲಯ, ಚಾವಿಸನಿನಿ, ಮೈಸೂರು ಮತ್ತು ಹಾಸನ ರವರ ಮಾಹಿತಿಗಾಗಿ ಮತ್ತು ಉಲ್ಲೇಖ ಪತ್ರದಲ್ಲಿ ನೀಡಿರುವ ಅಂಶಗಳ ಬಗ್ಗೆ ಸೂಕ್ತ ಕ್ರಮ ವಹಿಸುವಂತೆ ಸೂಚಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

**ಪ್ರತಿಗಳು ಮಾಹಿತಿಗಾಗಿ :**

1. ಅಧೀಕ್ಷಕ ಇಂಜಿನಿಯರ್(ವಿ), ಕಾ ಮತ್ತು ಪಾ ವೃತ್ತ, ಚಾವಿಸನಿನಿ,ಮೈಸೂರು/ಹಾಸನ/ಚಾಮರಾಜನಗರ–ಕೊಡಗು/ಮಂಡ್ಯ.
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ ವಿಭಾಗ, ಚಾವಿಸನಿನಿ.
3. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ ಉಪವಿಭಾಗಗಳು, ಚಾವಿಸನಿನಿ.
4. ಆ.ಸ ವ್ಯವಸ್ಥಾಪಕ ನಿರ್ದೇಶಕರು, ತಾಂತ್ರಿಕ ಸಹಾಯಕರು ನಿರ್ದೇಶಕರು (ತಾಂತ್ರಿಕ) ರವರ ಗಮನಕ್ಕೆ ತರಲು.

ಮು.ಕ/ಕಪ್ರ

9/7/20
ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
ಚಾ.ವಿ.ಸ.ನಿ.ನಿ, ಮೈಸೂರು.